ಅನುಬಂಧ

(ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ, 1993-1994ರ ಕರ್ನಾಟಕ ಅಧಿನಿಯಮ 14) ಇದರ ಉದ್ಧೃತ ಭಾಗ)

** ** **

152. **ಅಧ್ಯಕ್ಷರ ಅಧಿಕಾರಗಳು ಮತ್ತು ಕರ್ತವ್ಯಗಳು.-** ತಾಲ್ಲೂಕು ಪಂಚಾಯಿತಿಯ ಅಧ್ಯಕ್ಷನು,-

(ಎ) ತಾಲ್ಲೂಕು ಪಂಚಾಯಿತಿಯ ಸಭೆಗಳನ್ನು ಸಮಾವೇಶಗೊಳಿಸತಕ್ಕದ್ದು ; ಅದರ ಅಧ್ಯಕ್ಷೆ ವಹಿಸತಕ್ಕದ್ದು ಮತ್ತು ಅದನ್ನು ನಡೆಸತಕ್ಕದ್ದು :

(ಬಿ) ಈ ಅಧಿನಿಯಮದ ಮತ್ತು ಅದರ ಮೇರೆಗೆ ರಚಿಸಿದ ನಿಯಮಗಳ ಅಡಿಯಲ್ಲಿ ತನಗೆ ವಿಧಿಸಿದ ಎಲ್ಲಾ ಕರ್ತವ್ಯಗಳನ್ನು ನೆರವೇರಿಸತಕ್ಕದ್ದು ಮತ್ತು ಪ್ರದಾನ ಮಾಡಿದ ಎಲ್ಲಾ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಕಾಲಕಾಲಕ್ಕೆ ಸರ್ಕಾರವು ತನಗೆ ವಹಿಸಿಕೊಟ್ಟಂಥ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

(ಸಿ) ಈ ಅಧಿನಿಯಮದ ಉಪಬಂಧಗಳಿಗೆ ಅಥವಾ ಈ ಅಧಿನಿಯಮದಡಿ ಹೊರಡಿಸಿದ ಯಾವುದೇ ಸಾಮಾನ್ಯ ಅಥವಾ ನಿರ್ದಿಷ್ಟ ನಿರ್ದೇಶನಗಳಿಗೆ ಅಸಂಗತವಾಗಿರದ ತಾಲ್ಲೂಕು ಪಂಚಾಯಿತಿಯ ಅಥವಾ ಸ್ಥಾಯೀ ಸಮಿತಿಗಳ ನಿರ್ಣಯಗಳನ್ನು ಅಥವಾ ತೀರ್ಮಾನಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಕಾರ್ಯನಿರ್ವಾಹಕ ಅಧಿಕಾರಿಯ ಮೇಲೆ ಮೇಲ್ವಿಚಾರಣೆ ಮಾಡತಕ್ಕದ್ದು ಮತ್ತು ಅವನ ಮೇಲೆ ನಿಯಂತ್ರಣ ಅಧಿಕಾರವನ್ನು ಚಲಾಯಿಸತಕ್ಕದ್ದು.

(ಡಿ) ** ** **

156. **ಕಾರ್ಯನಿರ್ವಾಹಕ ಅಧಿಕಾರಿಯ, ಇತರ ಅಧಿಕಾರಿಗಳ ಹಾಗೂ ಸಿಬ್ಬಂದಿಯ ಪ್ರಕಾರ್ಯಗಳು.-**

(1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ಬೇರೆ ರೀತಿಯಲ್ಲಿ ಸ್ಪಷ್ಟವಾಗಿ ಉಪಬಂಧಿಸಿದುದನ್ನು ಉಳಿದು, ಕಾರ್ಯನಿರ್ವಾಹಕ ಅಧಿಕಾರಿಯು,-

(ಎ) ಈ ಅಧಿನಿಯಮದ ಮೂಲಕ ಅಥವಾ ಅದರಡಿಯಲ್ಲಿ ಅಥವಾ ತಾತ್ಕಲದಲ್ಲಿ ಜಾರಿಯಲ್ಲಿರುವ ಇತರ ಯಾವುದೇ ಕಾನೂನಿನ ಅಡಿಯಲ್ಲಿ ಅವನಿಗೆ ನಿರ್ದಿಷ್ಟವಾಗಿ ವಿಧಿಸಿರುವ ಅಥವಾ ಪ್ರದತ್ತವಾಗಿರುವ ಎಲ್ಲಾ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

(ಬಿ) ಸರ್ಕಾರವು ರಚಿಸಿದ ನಿಯಮಗಳಿಗೆ ಅನುಸಾರವಾಗಿ ತಾಲ್ಲೂಕು ಪಂಚಾಯಿತಿಯ ಅಥವಾ ಅದರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಥವಾ ಅದರ ಅಧೀನದಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಧಿಕಾರಿಗಳ ಮತ್ತು ನೌಕರರ ಮೇಲೆ ಕರ್ತವ್ಯಗಳನ್ನು ಗೊತ್ತುಪಡಿಸತಕ್ಕದ್ದು ಮತ್ತು ಅದರ ಮೇಲೆ ನಿಯಂತ್ರಣ ಇಟ್ಟುಕೊಳ್ಳತಕ್ಕದ್ದು.

(ಸಿ) ** ** **

159. ಜಿಲ್ಲಾ ಪಂಚಾಯಿತಿಯ ರಚನೆ.- (1) ಪ್ರತಿಯೊಂದು ಜಿಲ್ಲಾ ಪಂಚಾಯಿತಿಯು,-

(i) 160 ನೇ ಪ್ರಕರಣದ ಅಡಿಯಲ್ಲಿ ನಿರ್ಧರಿಸಿರುವಂತೆ ಚುನಾಯಿತ ಸದಸ್ಯರನ್ನು.

(ii) ಲೋಕಸಭೆ ಮತ್ತು ರಾಜ್ಯ ವಿಧಾನಸಭೆಯ ಯಾವ ಸದಸ್ಯರ ಚುನಾವಣೆ ಕ್ಷೇತ್ರಗಳು ಜಿಲ್ಲೆಯ ವ್ಯಾಪ್ತಿಯೊಳಗೆ ಇರುವುವೋ ಅಂಥ ಜಿಲ್ಲೆಯ ಒಂದು ಭಾಗವನ್ನು ಅಥವಾ ಸಮಗ್ರ ಜಿಲ್ಲೆಯನ್ನು ಪ್ರತಿನಿಧಿಸುವ ಸದಸ್ಯರನ್ನು.

(iii) ಜಿಲ್ಲೆಯ ವ್ಯಾಪ್ತಿಯೊಳಗೆ ಮತದಾರರೆಂದು ನೋಂದಾಯಿತರಾದ ರಾಜ್ಯಸಭೆಯ ಸದಸ್ಯರನ್ನು ಮತ್ತು ರಾಜ್ಯ ವಿಧಾನಪರಿಷತ್ತಿನ ಸದಸ್ಯರನ್ನು ಮತ್ತು

(iv) ಜಿಲ್ಲೆಯ ತಾಲ್ಲೂಕು ಪಂಚಾಯಿತಿಗಳ ಅಧ್ಯಕ್ಷರನ್ನು ಒಳಗೊಂಡಿರತಕ್ಕದ್ದು.

193. ಅಧ್ಯಕ್ಷರ ಅಧಿಕಾರಗಳು ಮತ್ತು ಕರ್ತವ್ಯಗಳು : ಜಿಲ್ಲಾ ಪಂಚಾಯಿತಿಯ ಅಧ್ಯಕ್ಷನು,-

(ಎ) ಜಿಲ್ಲಾ ಪಂಚಾಯಿತಿಯ ಸಭೆಗಳನ್ನು ಕರೆಯತಕ್ಕದ್ದು, ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ನಡೆಸತಕ್ಕದ್ದು.

(ಬಿ) ಅಧ್ಯಕ್ಷನು ಈ ಅಧಿನಿಯಮದ ಮೂಲಕ ಅಥವಾ ಅದರಡಿಯಲ್ಲಿ ವಿಧಿಸಿದ ಎಲ್ಲಾ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು ಮತ್ತು ವಹಿಸಿಕೊಟ್ಟಿರುವ ಎಲ್ಲಾ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಅಥವಾ ಸರ್ಕಾರವು ಕಾಲಕಾಲಕ್ಕೆ ವಹಿಸಿಕೊಟ್ಟಿರುವ ಕಾರ್ಯಗಳನ್ನು ನೆರವೇರಿಸತಕ್ಕದ್ದು.

(ಸಿ) ಈ ಅಧಿನಿಯಮದ ಉಪಬಂಧಗಳಿಗೆ ಅಥವಾ ಈ ಅಧಿನಿಯಮದ ಅಡಿಯಲ್ಲಿ ನೀಡಿದ ಸಾಮಾನ್ಯ ಅಥವಾ ನಿರ್ದಿಷ್ಟ ನಿರ್ದೇಶನಗಳಿಗೆ ಅಸಂಗತವಾಗಿರದ, ಜಿಲ್ಲಾ ಪಂಚಾಯಿತಿಯ ಅಥವಾ ಸ್ಥಾಯಿ ಸಮಿತಿಗಳ ನಿರ್ಣಯಗಳನ್ನು ಅಥವಾ ತೀರ್ಮಾನಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯ ಮೇಲೆ ಅಂಥ ಆಡಳಿತ ಮೇಲ್ವಿಚಾರಣೆ ಹಾಗೂ ನಿಯಂತ್ರಣ ಅಧಿಕಾರವನ್ನು ಚಲಾಯಿಸತಕ್ಕದ್ದು.

(ಡಿ) ** ** **
** ** **

197. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯ ಹಾಗೂ ಇತರ ಅಧಿಕಾರಿಗಳ ಕಾರ್ಯಗಳು, ಅಧಿಕಾರಿಗಳು ಮತ್ತು ಕರ್ತವ್ಯಗಳು,- (1) ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಸ್ಪಷ್ಟವಾಗಿ ಅನ್ಯಥಾ ಉಪಬಂಧಿಸಿದುದನ್ನುಳಿದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯು,-

(ಎ) ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ನಿರ್ದಿಷ್ಟವಾಗಿ ವಿಧಿಸಿರುವ ಅಥವಾ ವಹಿಸಿ ಕೊಟ್ಟಿರುವ ಎಲ್ಲ ಅಧಿಕಾರಗಳನ್ನು ಚಲಾಯಿಸತಕ್ಕದ್ದು.

(ಬಿ) ಸರ್ಕಾರವು ರಚಿಸಿದ ನಿಯಮಗಳಿಗನುಸಾರವಾಗಿ ಜಿಲ್ಲಾ ಪಂಚಾಯಿತಿಯ ಅಥವಾ ಅದರ ಅಧೀನದಲ್ಲಿನ ಹುದ್ದೆಯನ್ನು ಧಾರಣ ಮಾಡಿರುವ ಅಧಿಕಾರಿಗಳ ಮತ್ತು ನೌಕರರ ಕರ್ತವ್ಯಗಳನ್ನು ಗೊತ್ತುಪಡಿಸತಕ್ಕದ್ದು ಮತ್ತು ಮೇಲ್ವಿಚಾರಣೆ ಮತ್ತು ನಿಯಂತ್ರಣ ಮಾಡತಕ್ಕದ್ದು.

(ಸಿ) ** ** **
** ** **